**ಹಿರಿಯ  ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ & ಎಮ.ಎ.ಸಿ.ಟಿ XV, ಜೇವರ್ಗಿ**

**ಪ್ರಕರಣದ ಸಂಖ್ಯೆ  MVC-271/2021**

**ದಿನಾಂಕ 21-03-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

| | | | |
|---|---|---|---|
| ಸಾಕ್ಷಿಯ ಹೆಸರು | ಃ | ವಿಶ್ವನಾಥ | PW-1 |
| ತಂದೆಯ ಹೆಸರು | ಃ | ದೇವಿಂದ್ರಪ್ಪ ಕಂದಗಲ್ | |
| ವಯಸ್ಸು | ಃ | 30 ವರ್ಷ | |
| ಉದ್ಯೋಗ | ಃ | ಏನೂ ಇಲ್ಲ | |
| ವಾಸಸ್ಥಳ | ಃ | ಕಾಚಾಪೂರ | |

**ಮುಖ್ಯ ವಿಚಾರಣೆಃ ಶ್ರೀ ಎಸ್.ಎ.ಕೆ. ಅಜಿರ್ದಾರರ ಪರ ವಕೀಲರಿಂದಃ**

ಮುಖ್ಯ ವಿಚಾರಣೆ ಬದಲಾಗಿ ನಾನು ಸಲ್ಲಿಸಿದ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆ ಬದಲಾಗಿ ಸಲ್ಲಿಸಿರುವ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ.

ಯಡ್ರಾಮಿ ಪೋಲಿಸ ಠಾಣೆ ಗುನ್ನಾ ಸಂಖ್ಯೆ 73/2024 ರಲ್ಲಿ ಸಲ್ಲಿಸಿದ ಹೇಳಿಕೆ ದೂರಿನ ದೃಢೀಕೃತ ನಕಲನ್ನು ಹಾಜರುಪಡಿಸಿದು ಅದನ್ನು ನಿಶಾನೆ ಪಿ-1 ಎಂದು ಗುರುತಿಸಲಾಯಿತು.

ಯಡ್ರಾಮಿ ಪೋಲಿಸ ಠಾಣೆ ಗುನ್ನಾ ಸಂಖ್ಯೆ 73/2024  ರ ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ-2 ಎಂದು ಗುರುತಿಸಲಾಯಿತು.

ಯಡ್ರಾಮಿ ಪೋಲಿಸ ಠಾಣೆ ಗುನ್ನಾ ಸಂಖ್ಯೆ 73/2024 ರ ಅಪರಾಧ ವಿವರ ನಮೂನೆಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ-3 ಎಂದು ಗುರುತಿಸಲಾಯಿತು.

ಯಡ್ರಾಮಿ ಪೋಲಿಸ ಠಾಣೆ ಗುನ್ನಾ ಸಂಖ್ಯೆ 73/2024  ರ ನನಗೆ ಸಂಬಂಧಸಿದ ಗಾಯದ ಪ್ರಮಾಣ ಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ-4 ಎಂದು ಗುರುತಿಸಲಾಯಿತು.

ಯಡ್ರಾಮಿ ಪೋಲಿಸ ಠಾಣೆ ಗುನ್ನಾ ಸಂಖ್ಯೆ 73/2024 ರ IMV ವರದಿಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ-5 ಎಂದು ಗುರುತಿಸಲಾಯಿತು.

ಯಡ್ರಾಮಿ ಪೋಲಿಸ ಠಾಣೆ ಗುನ್ನಾ ಸಂಖ್ಯೆ 73/2024 ರ ಅಂತಿಮ ವರದಿಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ-6 ಎಂದು ಗುರುತಿಸಲಾಯಿತು

ಸಿಸಿ 430/2024 ರ ಪ್ರಕರಣದ ಆದೇಶ ಪುಟಗಳ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ-7 ಎಂದು ಗುರುತಿಸಲಾಯಿತು.

ಔಷಧಿ ಹಾಗೂ ಆಸ್ಪತ್ರೆಯ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-8 ರಿಂದ 28 ಎಂದು ಗುರುತಿಸಲಾಯಿತು

**ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ.ಇದೆ.

ಹಿರಿಯ ಶ್ರೇಣಿ ದಿವಾನಿ ನ್ಯಾಯಾಧೀಶರು
ಜೇವರ್ಗಿ